## 2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ
## ಚಿಕ್ಕೋಡಿ

CC No.:-1884/2018

C.W.:-2

P.W.:-1

| | |
|---|---|
| ಸಾಕ್ಷಿದಾರನ ಹೆಸರು | ರಾಜು ಅಪರಾಜ |
| ತಂದೆಯ ಹೆಸರು | ಹಸನ್ |
| ವಯಸ್ಸು | 53 ವರ್ಷ |
| ಕೆಲಸ | ಕೂಲಿ ಕೆಲಸ |
| ವಾಸ | ಯಡೂರ |

ಸಾಕ್ಷಿಗೆ ಈ ದಿನ ದಿಃ 08-04-2026 ರಂದು ಪ್ರಮಾಣ ವಚನ ಬೋಧಿಸಲಾಯಿತು

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭೀಯೋಜಕರಿಂದಃ**

ಚಾಸಾ 1,3 ಮತ್ತು ಆರೋಪಿತರ ಪರಿಚಯ ಇರುವುದಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

ಸಾಕ್ಷಿಯು ಪಂಚನಾಮೆಯ ಮೇಲೆ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ 1 ಎಂದು ಮತ್ತು ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ 1ಎ ಎಂದು ಗುರುತಿಸಲಾಯಿತು. 2018 ರಲ್ಲಿ ನಾನು ಅಂಕಲಿ ಪೊಲೀಸ ಠಾಣೆಗೆ ಬೇಟಿ ನೀಡಿದಾಗ ಪೊಲೀಸರು ಸದರಿ ನಿ ಪಿ 1 ರ ಮೇಲೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ನಿ ಪಿ 1 ರಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಸಸಅ ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ ಅವರ ವಾದನ್ನು ಆಲಿಸಿ ಪಾಟೀ ಸವಾಲು ಮಾಡಲು ಸಸಅ ರವರಿಗೆ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ07-07-2018 ರಂದು ನನ್ನ ಮತ್ತು ಚಾಸಾ 3 ರವರ ಸಮಕ್ಷಮ ಚಾಸಾ 1 ರವರು ತೋರಿಸಿದಂತೆ ಪೊಲೀಸರು ಅಪರಾಧ ಸ್ಥಳ ಪಂಚನಾಮೆಯನ್ನು ಬೆಳಗ್ಗೆ 9.00 ರಿಂದ 10.00 ಗಂಟೆ ವರೆಗೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಜರುಗಿಸಿ ನಿ ಪಿ 1 ರಂತೆ ತಯಾರು ಮಾಡಿ ಅದರ ಮೇಲೆ ನಮ್ಮ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ನನಗೆ ನಿ ಪಿ1 ರಂತೆ ಮಾಹಿತಿ ಇದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ   ಆರೋಪಿ ಪರ ಶ್ರೀ ಎಂ ಎಸ್ ಎಲ್ ವಕೀಲರಿಂದಃ**

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರು ವಿಚಾರಣೆ ಇಲ್ಲ.

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ,

C/C2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಕ್ಕೋಡಿ

**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ**

**ಚಿಕ್ಕೋಡಿ**

CC No.:-1884/2018

C.W.:-7

P.W.:-2

| | |
|---|---|
| ಸಾಕ್ಷಿದಾರನ ಹೆಸರು | ರಿಯಾಜಹ್ಮದ ಬೆಟಗೇರಿ |
| ತಂದೆಯ ಹೆಸರು | ಅಲ್ಲಾಬಕ್ಷ |
| ವಯಸ್ಸು | 52 ವರ್ಷ |
| ಕೆಲಸ | ಗುತ್ತಿಗೆದಾರ |
| ವಾಸ | ಹುಬ್ಬಳ್ಳಿ |

ಸಾಕ್ಷಿಗೆ ಈ ದಿನ ದಿಃ 08-04-2026 ರಂದು ಪ್ರಮಾಣ ವಚನ ಬೋಧಿಸಲಾಯಿತು

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭೀಯೋಜಕರಿಂದಃ**

ಚಾಸಾ 1,4 ರಿಂದ 6 ಮತ್ತು ಆರೋಪಿತರ ಪರಿಚಯ ಇರುವುದಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

ಈ ಪ್ರಕರಣದಲ್ಲಿ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೆ ಜಗಳವನ್ನು ನೋಡಿರುವುದಿಲ್ಲ ಹಾಗೂ ಬಿಡಿಸಿರುವುದಿಲ್ಲ. ಪೊಲೀಸರು ನನ್ನ ಹೇಳಿಕೆ ಪಡೆದುಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಸಸಅ ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ ಅವರ ವಾದನ್ನು ಆಲಿಸಿ ಪಾಟೀ ಸವಾಲು ಮಾಡಲು ಸಸಅ ರವರಿಗೆ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ06-07-2018 ರಂದು ಮದ್ಯಾಹ್ನ 12.00 ಗಂಟೆ ಸುಮಾರಿಗೆ ನಾನು ನಮ್ಮ ಸಂಬಂಧಿಕರ ಮನೆಗೆ ಬೇಟಿ ನೀಡಿದಾಗ 1 ನೇ ಆರೋಪಿತಳು ಚಾಸಾ 1 ರವರ ಮನೆಯ ಹತ್ತಿರ ಕಸ ಒಗೆಯುತ್ತಿರುವಾಗ ಚಾಸಾ 1 ರವರು 1 ನೇ ಆರೋಪಿಗೆ ಪ್ರಶ್ನಿಸಿದ್ದಕ್ಕೆ

ಆರೋಪಿತರು ಚಾಸಾ 1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಚಾಸಾ 4 ರಿಂದ 6 ಹಾಗೂ ನಾನು ಅಲ್ಲಿಗೆ ಹೋಗಿ ನೋಡಿದಾಗ ಆರೋಪಿತರು ಚಾಸಾ 1 ರವರಿಗೆ ಏ ಬೋಸಡಿ ನಿಂದ ಬಾಳ ಆಗೇತಿ ಎಂದು ಹೇಳಿ ಗಟ್ಟಿಯಾಗಿ ಹಿಡಿದು ಕೈಯಿಂದ ಹೊಡಿ ಬಡಿ ಮಾಡಿ 2 ನೇ ಆರೋಪಿಯು ಚಾಸಾ 1 ರವರಿಗೆ ಜಗ್ಗಾಡಿ ಮಾನಬಂಗ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆಗ ನಾನು ಮತ್ತು ಚಾಸಾ 4 ರಿಂದ 6 ರವರು ಸದರಿ ಜಗಳವನ್ನು ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಆ ವೇಳೆ ಆರೋಪಿತರು ಚಾಸಾ 1 ರವರಿಗೆ ಜೀವದ ಧಮಕಿ ಹಾಕಿರುತ್ತಾರೆ ಎಂದರೆ ಸರಿಯಲ್ಲ. ನಂತರ ಚಾಸಾ 1 ರವರಿಗೆ ಆಸ್ಪತ್ರೆಗೆ ದಾಖಲಿಸಿ ಉಪಚಾರ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಈ ಕುರಿತು ಚಾಸಾ 1 ರವರು ಪೊಲೀಸರಿಗೆ ಫಿರ್ಯಾದಿ ನೀಡಿರುತ್ತಾರೆ ಎಂದರೆ ಸರಿಯಲ್ಲ.

ದಿಃ07.07.2018 ರಂದು ಪೊಲೀಸರಿಗೆ "ನಿನ್ನೆ ದಿಃ06.07.2018 ರಂದು......... ಫಿರ್ಯಾದಿ ಕೊಟ್ಟಿದ್ದು ಗೊತ್ತಾಗಿರುತ್ತದೆ" ಎಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆ ಭಾಗವನ್ನು ನಿ ಪಿ 2 ಎಂದು ಗುರುತಿಸಲಾಯಿತು. ಪ್ರಕರಣದಲ್ಲಿ ನನಗೆ ಮಾಹಿತಿ ಇದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ ಎಸ್ ಎಲ್ ವಕೀಲರಿಂದಃ**

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರು ವಿಚಾರಣೆ ಇಲ್ಲ.

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತು ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ,

C/C2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಕ್ಕೋಡಿ